**RNU AIR DHARWAD**

# JULY 07, 2025
# AKASHAVANI - DHARWAD
# PRADESH SAAMACHARA (KANNADA) 7.05 A.M

ಮುಖ್ಯಾಂಶಗಳು

- ರಾಜ್ಯದಲ್ಲಿ ಒಳ ಮೀಸಲಾತಿ ಜಾರಿಯ ಬಳಿಕ, ಬಾಕಿ ಹುದ್ದೆಗಳ ನೇಮಕಾತಿಗೆ ಕ್ರಮ – ಸಚಿವ ಡಾಕ್ಟರ್ ಜಿ.ಪರಮೇಶ್ವರ್.
- ಕುಶಲಕರ್ಮಿಗಳ ಆರ್ಥಿಕ ಸ್ವಾವಲಂಬನೆಗೆ ಪಿಎಂ ವಿಶ್ವಕರ್ಮ ಯೋಜನೆ ಸಹಕಾರಿ – ಕೇಂದ್ರ ಸಚಿವ ಪ್ರಲ್ಹಾದ ಜೋಶಿ.
- ಗೌರಿಬಿದನೂರಿನಲ್ಲಿ 24 ಸಾವಿರ ಮೆಗಾ ವ್ಯಾಟ್ ವಿದ್ಯುತ್ ಉತ್ಪಾದಿಸಲು ಸರ್ಕಾರದ ಚಿಂತನೆ – ಸಚಿವ ಕೆ.ಜೆ.ಜಾರ್ಜ್.
- ನಾಡಿನಾದ್ಯಂತ ಆಷಾಢ ಏಕಾದಶಿ ಶ್ರದ್ಧಾ–ಭಕ್ತಿಯಿಂದ ಆಚರಣೆ.

ಈಗ ವಾರ್ತೆಗಳ ವಿವರ

ರಾಜ್ಯದಲ್ಲಿ ಒಳ ಮೀಸಲಾತಿ ಜಾರಿ ಮಾಡಲು ಸರ್ಕಾರ ಬದ್ಧವಾಗಿದೆ ಎಂದು ಗೃಹ ಖಾತೆ ಸಚಿವ ಡಾಕ್ಟರ್ ಜಿ.ಪರಮೇಶ್ವರ್ ಸ್ಪ ್ಟಪಡಿಸಿದ್ದಾರೆ. ತುಮಕೂರು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ನಡೆದ ಮಾಜಿ ಉಪಪ್ರಧಾನಿ ಡಾಕ್ಟರ್ ಬಾಬು ಜಗಜೀವನ್ ರಾಮ್‌ರವರ ಪುಣ್ಯಸ್ಮರಣೆಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಅವರು ಮಾತನಾಡಿದರು. ರಾಜ್ಯದಲ್ಲಿ 2.50 ಲಕ್ಷ ಹುದ್ದೆಗಳು ನೇಮಕವಾಗಬೇಕಿದೆ. ಪೊಲೀಸ್ ಇಲಾಖೆಯಲ್ಲಿ 18 ಸಾವಿರ ಹುದ್ದೆಗಳು ಹಾಗೂ ಕಾರಾಗೃಹದಲ್ಲಿ ಶೇಕಡ 38ರ ್ಟ ಹುದ್ದೆಗಳು ಖಾಲಿ ಇವೆ. ಆರೋಗ್ಯ ಹಾಗೂ ಶಿಕ್ಷಣ ಇಲಾಖೆಗಳಲ್ಲಿ ನೇಮಕಾತಿ ನಡೆಯಬೇಕಿದೆ. ಒಳ ಮೀಸಲಾತಿ ತೀರ್ಮಾನ ಆಗುವವರೆಗೂ ನೇಮಕಾತಿ ಹಾಗೂ ಮುಂಬಡ್ತಿ ನೀಡುವುದಿಲ್ಲ ಎಂಬ ಕಠಿಣ ನಿರ್ಧಾರವನ್ನು ರಾಜ್ಯ ಸರ್ಕಾರ ತೆಗೆದುಕೊಂಡಿದೆ ಎಂದು ತಿಳಿಸಿದರು.

<><><>

ಪಿಎಂ ವಿಶ್ವಕರ್ಮ ಯೋಜನೆ ಭಾರತ ಸರ್ಕಾರದ ಒಂದು ಕೇಂದ್ರ ವಲಯ ಯೋಜನೆಯಾಗಿದೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಆಯೋಜಿಸಲಾಗಿದ್ದ ಪಿಎಂ. ವಿಶ್ವಕರ್ಮ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕೈಯಿಂದ ಮತ್ತು ಉಪಕರಣಗಳನ್ನು ಬಳಸಿ ಕೆಲಸ ಮಾಡುವ ಸಾಂಪ್ರದಾಯಿಕ ಕುಶಲಕರ್ಮಿಗಳು ಮತ್ತು ಕರಕುಶಲ ಕಲಾವಿದರಿಗೆ ಸರ್ವಾಂಗೀಣ ಬೆಂಬಲವನ್ನು ಒದಗಿಸಲು 2023 ರ ಸೆಪ್ಟೆಂಬರ್ 17 ರಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ಚಾಲನೆಗೊಂಡಿತು. ಈ ಯೋಜನೆಯು ಭಾರತದ ಸಾಂಪ್ರದಾಯಿಕ ಕರಕುಶಲತೆಯನ್ನು ಸಂರಕ್ಷಿಸುವುದರ ಜೊತೆಗೆ ಕುಶಲಕರ್ಮಿಗಳಿಗೆ ಆರ್ಥಿಕ ಸ್ವಾವಲಂಬನೆಯನ್ನು ಒದಗಿಸುವ ಗುರಿ ಹೊಂದಿದೆ ಎಂದರು.

<><><>

ತುರ್ತು ಪರಿಸ್ಥಿತಿ ಹೇರಿಕೆಯಾಗಿ, 50 ವರ್ಷ ತುಂಬಿದ ಹಿನ್ನೆಲೆ, ದೇಶಾದ್ಯಂತ ಸಂವಿಧಾನ ಹತ್ಯಾ ದಿನ ಹಾಗು ಪ್ರಜಾಪ್ರಭುತ್ವ ಸ್ಪೂರ್ತಿ ಬಿಂಬಿಸುವ ದೀಪಶಿಖಾ ಯಾತ್ರೆ ಇಡೀ ವರ್ಷ ದೇಶಾದ್ಯಂತ ಸಂಚರಿಸಲಿದೆ. ಇತ್ತೀಚೆಗೆ ಹೊಸ ದಿಲ್ಲಿಯಲ್ಲಿ ದೀಪಶಿಖಾ ಯಾತ್ರೆಗೆ ಚಾಲನೆ ದೊರೆತಿದೆ. 2026 ರ ಮಾರ್ಚ್ 21 ರಂದು ಪ್ರಧಾನಮಂತ್ರಿ ನರೆಂದ್ರ ಮೋದಿ ಅವರ ಸಮ್ಮುಖದಲ್ಲಿ, ಈ ಯಾತ್ರೆ ಕೊನೆಗೊಳ್ಳಲಿದೆ. ಈ ಕುರಿತು, ಒಂದು ವರದಿ.

ಅಂದಿನ ಪ್ರಧಾನಮಂತ್ರಿ ಶ್ರೀಮತಿ ಇಂದಿರಾಗಾಂಧಿ ಅವರು, ದೇಶದ ಮೇಲೆ ತುರ್ತು ಪರಿಸ್ಥಿತಿ ಹೇರಿ, ದಮನಕಾರಿ ನೀತಿಯನ್ನು ಅನುಸರಿಸಿದರು ಎಂದು ಆರೋಪಿಸಿ ಬಿಜೆಪಿ ಹಾಗೂ ಎನ್.ಡಿ.ಎ ಮಿತ್ರಪಕ್ಷಗಳು ದೇಶಾದ್ಯಂತ ವರ್ಷವಿಡೀ ದೀಪಶಿಖಾ ಯಾತ್ರೆ ಆಯೋಜಿಸಿ, ಸಂವಿಧಾನ ಹಾಗೂ ಪ್ರಜಾಪ್ರಭುತ್ವದ ಸ್ಪೂರ್ತಿ ಬಿಂಬಿಸುವ ಸಂಕಲ್ಪ ಮಾಡಿವೆ. ತುರ್ತು ಪರಿಸ್ಥಿತಿಯ ಕರಾಳ ಅಧ್ಯಾಯ ನೆನಪಿಸಲು, ಸಂವಿಧಾನ ಹತ್ಯೆ ದಿನ ಶೀರ್ಷಿಕೆಯ ಕಿರುಚಿತ್ರವನ್ನು, ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯ, ತನ್ನ ಜಾಲತಾಣದಲ್ಲಿ ಪ್ರದರ್ಶಿಸಿದೆ.

ತುರ್ತು ಪರಿಸ್ಥಿತಿ ಹೇರಿಕೆಯಾದ ಸಂದರ್ಭದಲ್ಲಿ, ಜೈಲುವಾಸ ಅನುಭವಿಸಿದ, ಬೆಳಗಾವಿಯ ಹೆಸರಾಂತ ಹಿರಿಯ ಸಾಮಾಜಿಕ ಕಾರ್ಯಕರ್ತೆ ಹಾಗೂ ರಾಷ್ಟ್ರ ಸೇವಿಕಾ ಸಮಿತಿ ರಾಷ್ಟ್ರೀಯ ಸಹಸರ ಕಾರ್ಯವಾಹಿಕಾ ಅಲಕಾ ಇನಾಮದಾರ, ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನುಭವ ಹಂಚಿಕೊಂಡಿದ್ದಾರೆ.

<><><>

ನರೇಂದ್ರ ಮೋದಿಯವರು ಪ್ರಧಾನಮಂತ್ರಿಯಾದ ಬಳಿಕ, ಕಳೆದ 11 ವರ್ಷಗಳಲ್ಲಿ, ದೇಶ ವಿಶ್ವದ 4 ನೇ ಅತಿ ದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದೆ. ಡಿಜಿಟಲ್ ತಂತ್ರಜ್ಞಾನ ವ್ಯವಹಾರದಲ್ಲಿ ಜಗತ್ತಿನಲ್ಲಿ ಮೊದಲ ಸ್ಥಾನದಲ್ಲಿದೆ. ದೇಶದ ಜಿಡಿಪಿ ಹೆಚ್ಚಾಗಿದೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘದ ಪಾಟೀಲ ಪುಟ್ಟಪ್ಪ ಸಭಾಂಗಣದಲ್ಲಿ, ಆಯೋಜಿಸಲಾಗಿದ್ದ, ವಿಕಸಿತ ಭಾರತ ಸಂಕಲ್ಪ ಸಭೆ ಮತ್ತು ತುರ್ತು ಪರಿಸ್ಥಿತಿಯ ಕರಾಳ ದಿನಗಳ ಹೋರಾಟದ 50 ನೇ ವರ್ಷದ ಅನಾವರಣ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

<><><>

ರಾಜ್ಯದಲ್ಲಿ ವಿದ್ಯುತ್ ಬೇಡಿಕೆ ಹೆಚ್ಚಳವಾಗುತ್ತಿರುವ ಹಿನ್ನೆಲೆ, ಹೆಚ್ಚಿನ ವಿದ್ಯುತ್ ಉತ್ಪಾದನೆಗೆ ಸರ್ಕಾರ ಕ್ರಮ ಕೈಗೊಂಡಿದೆ ಎಂದು ಇಂಧನ ಖಾತೆ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ. ಚಿಕ್ಕಮಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶರಾವತಿಯಲ್ಲಿ ಪ್ರಸ್ತುತ ಒಂದು ಸಾವಿರ ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತಿದೆ. ಅಲ್ಲಿಯ ನೀರನ್ನು ಮರು ಬಳಕೆ ಮಾಡಿ ಸುಮಾರು ಎರಡು ಸಾವಿರ ಮೆಗಾ ವ್ಯಾಟ್ ವಿದ್ಯುತ್ ಉತ್ಪಾದಿಸಲು ಕ್ರಮ ಕೈಗೊಂಡು ಕಾಮಗಾರಿ ಆರಂಭಿಸಲಾಗಿದೆ. ಗೌರಿಬಿದನೂರಿನಲ್ಲಿ ಸುಮಾರು 10 ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ 24 ಸಾವಿರ ಮೆಗಾ ವ್ಯಾಟ್ ವಿದ್ಯುತ್ ಉತ್ಪಾದಿಸಲು ಚಿಂತನೆ ನಡೆಸಲಾಗಿದೆ ಎಂದು ತಿಳಿಸಿದರು.

<><><>

ನಾಡಿನ ಶ್ರೀ ವಿಠ್ಠಲ ಹಾಗೂ ರುಕುಮಾಯಿ ಮಂದಿರಗಳಲ್ಲಿ ಆಷಾಢ ಏಕಾದಶಿಯನ್ನು ಶ್ರದ್ಧಾ-ಭಕ್ತಿಯಿಂದ ಆಚರಿಸಲಾಯಿತು. ಧಾರವಾಡದ ಜ್ಞಾನೇಶ್ವರಿ ನಗರದಲ್ಲಿರುವ ಕಾನಡ ವಿಠ್ಠಲ ರುಕ್ಮೀಣಿ ಮಂದಿರದಲ್ಲಿ ಜರುಗಿದ ಆಚರಣೆಯಲ್ಲಿ ಸಾವಿರಾರು ಭಕ್ತಾದಿಗಳು ಪಾಲ್ಗೊಂಡಿದ್ದರು. ಆಷಾಢ ಏಕಾದಶಿ ಆಚರಣೆ ವಿಶೇಷತೆ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಧಾರವಾಡದ ಕಾನಡ ಶ್ರೀ ವಿಠ್ಠಲ ರುಕ್ಮೀಣಿ ಮಂದಿರ ಸಮಿತಿ ಅಧ್ಯಕ್ಷರಾದ ಮಾರುತಿ ಭಿಷೆ.
ಧ್ವನಿ – ಮಾರುತಿ ಭಿಷೆ (35 ಸೆಕೆಂದುಗಳು)

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬ್ರೆಜಿಲ್ ರಾಜಧಾನಿ ರಿಯೋ ಡಿ ಜನ್ಯೆರೋದಲ್ಲಿ ನಡೆಯುತ್ತಿರುವ ಬ್ರಿಕ್ಸ್ ಶೃಂಗ ಸಮ್ಮೇಳನದಲ್ಲಿ ಭಾಗವಹಿಸಿದ್ದಾರೆ. ಈ ಕುರಿತು ಬ್ರೆಜಿಲ್‌ನ ರಿಯೊಡಿ ಜನ್ಯೆರೊದಿಂದ ನಮ್ಮ ಬಾತ್ಮೀದಾರರಾದ ಸುಧೀಂದ್ರ. ಹೆಚ್ಚಿನ ಮಾಹಿತಿ ನೀಡಿದ್ದಾರೆ.

<><><>